# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರೂಪ್ - ಬಿ ಮತ್ತು ಗ್ರೂಪ್ - ಎ ವೃಂದದ ಹುದ್ದೆಗಳಿಗೆ ಮುಂಬಡ್ತಿಗೆ ಸಂಬಂಧಿಸಿದಂತೆ ಇಲಾಖಾ ಮುಂಬಡ್ತಿ ಸಮಿತಿ ರಚನೆ ಬಗ್ಗೆ - ಆದೇಶ

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 48 ಜಿಪಅ 2008 ದಿನಾಂಕ 12-03-2008
2. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 75 ಸೆನೆನಿ 2010 ದಿನಾಂಕ 19-05-2010.
3. ಸರ್ಕಾರದ ಆದೇಶ ಸಂಖ್ಯೆ ಸಿಆಸುಇ 18 ಸೆನೆನಿ 2011 ದಿನಾಂಕ 29-08-2011

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 12-03-2008ರ ಆದೇಶದಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಸಮೂಹ-ಎ ಕಿರಿಯ ಶ್ರೇಣಿ ಹುದ್ದೆಗಳಿಗೆ ಮುಂಬಡ್ತಿ ನೀಡುವುದಕ್ಕೆ ಸಂಬಂಧಿಸಿದಂತೆ ಇಲಾಖಾ ಮುಂಬಡ್ತಿ ಸಮಿತಿಯನ್ನು ರಚಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ 19-05-2010ರ ಆದೇಶದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಇಲಾಖಾ ಮುಂಬಡ್ತಿ ಸಮಿತಿ ರಚನೆ ಬಗ್ಗೆ ಆದೇಶ ನೀಡಿರುತ್ತದೆ.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ 29-08-2011ರ ಆದೇಶದಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ರಾಜ್ಯ ಸಿವಿಲ್ ಸೇವೆಯಲ್ಲಿನ ಹುದ್ದೆಗಳಿಗೆ ಮುಂಬಡ್ತಿ ನೀಡುವ ಕುರಿತಂತೆ ರಚಿಸಲಾದ ಇಲಾಖಾ ಮುಂಬಡ್ತಿ ಸಮಿತಿಗಳಲ್ಲಿ ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿಯನ್ನು ಸದಸ್ಯರನ್ನಾಗಿ ನೇಮಕ ಮಾಡುವ ಕುರಿತ್ತಂತೆ ಆದೇಶ ಹೊರಡಿಸಿರುತ್ತದೆ.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರೂಪ್ - ಬಿ ಮತ್ತು ಗ್ರೂಪ್ - ಎ ವೃಂದದ ಹುದ್ದೆಗಳಿಗೆ ಮುಂಬಡ್ತಿಗೆ ಪರಿಗಣಿಸುವ ಸಲುವಾಗಿ ಇಲಾಖಾ ಮುಂಬಡ್ತಿ ಸಮಿತಿಯನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ಮೇಲೆ ಕ್ರಮ ಸಂಖ್ಯೆ (2) ಮತ್ತು (3)ರಲ್ಲಿ ಓದಲಾಗಿರುವ ಆದೇಶಗಳಲ್ಲಿನ ಅಂಶಗಳನ್ನು ಗಣನೆಗೆ ತೆಗೆದುಕೊಂಡು ರಚಿಸಲು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

## ಆದೇಶ ಸಂಖ್ಯೆ. ಗ್ರಾಅಪ 426 ಸೇಶಿಕಾ 2014, ಬೆಂಗಳೂರು, ದಿನಾಂಕ. 04-05-2015

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರವು ಆದೇಶ ಸಂಖ್ಯೆ ಗ್ರಾಅಪ 48 ಜಿಪಅ 2008 ದಿನಾಂಕ 12-03-2008ರಲ್ಲಿ ರಚಿಸಿದ್ದ ಇಲಾಖಾ ಮುಂಬಡ್ತಿ ಸಮಿತಿಯನ್ನು ರದ್ದುಪಡಿಸಿ,

---2

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಗ್ರೂಪ್ - ಬಿ ಮತ್ತು ಗ್ರೂಪ್ - ಎ ವೃಂದದ ಹುದ್ದೆಗಳಿಗೆ ಮುಂಬಡ್ತಿಗೆ ಪರಿಗಣಿಸುವ ಸಲುವಾಗಿ ಈ ಕೆಳಕಂಡಂತೆ ಇಲಾಖಾ ಮುಂಬಡ್ತಿ ಸಮಿತಿಯನ್ನು ರಚಿಸಿ ಆದೇಶಿಸಿದೆ:-

## I. ಗ್ರೂಪ್-ಸಿ ವೃಂದದಿಂದ ಗ್ರೂಪ್-ಬಿ ವೃಂದಕ್ಕೆ ಮುಂಬಡ್ತಿ ನೀಡಲು:-

| | | |
|---|---|---|
| 1. | ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ. | - ಅಧ್ಯಕ್ಷರು |
| 2. | ನಿರ್ದೇಶಕರು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ.<br>[ಪಂಚಾಯತ್ ಅಭಿವೃದ್ಧಿ ಅಧಿಕಾರಿ ಹುದ್ದೆಯಿಂದ ಸಹಾಯಕ ನಿರ್ದೇಶಕರು (ಗ್ರಾ.ಉ.) ಹುದ್ದೆಗಳಿಗೆ ಸಂಬಂಧಿಸಿದಂತೆ] | - ಸದಸ್ಯರು |
| 3. | ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಒಬ್ಬ ಅಧಿಕಾರಿ (ಗ್ರೂಪ್ -ಎ ಹಿರಿಯ ಶ್ರೇಣಿ ಅಧಿಕಾರಿ)<br>(ಆದೇಶ ಸಂಖ್ಯೆ ಸಿಆಸುಇ 18 ಸೆನೆನಿ 2011 ದಿನಾಂಕ 29-08-2011ರಂತೆ) | - ಸದಸ್ಯರು |
| 4. | ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ.ಅ.ಪಂ.ರಾಜ್ ಇಲಾಖೆ. | - ಸದಸ್ಯ ಕಾರ್ಯದರ್ಶಿ |

## II. ಗ್ರೂಪ್-ಬಿ ವೃಂದದಿಂದ ಗ್ರೂಪ್-ಎ ವೃಂದಕ್ಕೆ ಮುಂಬಡ್ತಿ ನೀಡಲು:-

| | | |
|---|---|---|
| 1. | ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ. | - ಅಧ್ಯಕ್ಷರು |
| 2. | **ಅ. ಕಾರ್ಯದರ್ಶಿ (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ.**<br>[ಸಹಾಯಕ ನಿರ್ದೇಶಕರು (ಗ್ರಾ.ಉ.) ಹುದ್ದೆಯಿಂದ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆ ಹಾಗೂ ಮೇಲ್ಪಟ್ಟದ ಹುದ್ದೆಗಳಿಗೆ]<br>**ಆ. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ.**<br>[ಸಹಾಯಕ ಇಂಜಿನಿಯರ್ ಹುದ್ದೆಯಿಂದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹಾಗೂ ಮೇಲ್ಪಟ್ಟ ಹುದ್ದೆಗಳಿಗೆ ] | - ಸದಸ್ಯರು<br>- ಸದಸ್ಯರು |
| 3. | ಸಂಸದೀಯ ವ್ಯವಹಾರಗಳು ಮತ್ತು ಶಾಸಕ ರಚನಾ ಇಲಾಖೆಯ ಪ್ರತಿನಿಧಿ - ಉಪ ಕಾರ್ಯದರ್ಶಿ ಹುದ್ದೆಗಿಂತ ಕಡಿಮೆ ಇಲ್ಲದ ಅಧಿಕಾರಿ | - ಸದಸ್ಯರು |

---3

| | | |
|---|---|---|
| 4. | ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡಕ್ಕೆ ಸೇರಿದ ಒಬ್ಬ ಅಧಿಕಾರಿ (ಗ್ರೂಪ್ – ಎ ಹಿರಿಯ ಶ್ರೇಣಿಯ ಅಧಿಕಾರಿ) (ಆದೇಶ ಸಂಖ್ಯೆ ಸಿಆಸುಇ 18 ಸೇನೆನಿ 2011 ದಿನಾಂಕ 29-08-2011ರಂತೆ) | – ಸದಸ್ಯರು |
| 5. | ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ) | – ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

( ಸಿದ್ದೇಶ್ ಪೋತಲಕಟ್ಟಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ. / ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ / ಸಮಾಜ ಕಲ್ಯಾಣ ಇಲಾಖೆ /
3. ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರ ಮತ್ತು ರಚನಾ ಇಲಾಖೆ.
4. ನಿರ್ದೇಶಕರು (ಪಂ.ರಾಜ್) / (ಗ್ರಾ.ಉ.), ಗ್ರಾ.ಅ.ಪಂ.ರಾಜ್ ಇಲಾಖೆ.
5. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, ಆನಂದರಾವ್ ಸರ್ಕಲ್, ಬೆಂಗಳೂರು.
6. ಸರ್ಕಾರದ ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾ.ಅ.ಪಂ.ರಾಜ್ ಇಲಾಖೆ.
7. ಮೇಲ್ವಿಚಾರಕರು, ಗಣಕಯಂತ್ರ ವಿಭಾಗ, ಗ್ರಾ.ಅ.ಪಂ.ರಾಜ್ ಇಲಾಖೆ ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
8. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.